ಕರ್ನಾಟಕ ಸರ್ಕಾರ

ಸಂಖ್ಯೆ: ಗ್ರಾಅಪ 44 ಗ್ರಾಪಂಸಿ 2015

ಕರ್ನಾಟಕ ಸರ್ಕಾರ ಸಚಿವಾಲಯ,
ಬಹುಮಹಡಿಗಳ ಕಟ್ಟಡ,
ಬೆಂಗಳೂರು, ದಿನಾಂಕ: 25.01.2019.

## ಅಧಿಸೂಚನೆ

ಕರ್ನಾಟಕ ರಾಜ್ಯ ಸಿವಿಲ್ ಸೇವಾ ಅಧಿನಿಯಮ, 1978 (1990ರ ಕರ್ನಾಟಕ ಅಧಿನಿಯಮ ಸಂಖ್ಯೆ.14) ರ ಕಲಂ 3ರ ಅಡಿಯ ಉಪಕಲಂ (2) ಖಂಡ (ಎ) ರಲ್ಲಿ ಅಗತ್ಯಪಡಿಸಲಾಗಿರುವಂತೆ ಕರ್ನಾಟಕ ಸಾಮಾನ್ಯ ಸೇವೆ (ಅಭಿವೃದ್ಧಿ ಶಾಖೆ ಹಾಗೂ ಸ್ಥಳೀಯ ಆಡಳಿತ ಶಾಖೆ) (ವೃಂದ ಮತ್ತು ನೇಮಕಾತಿ) ನಿಯಮಗಳು, 2008ಕ್ಕೆ ತಿದ್ದುಪಡಿ ಮಾಡಲು ಈ ಕೆಳಕಂಡ ನಿಯಮಗಳ ಕರಡನ್ನು ಈ ಮೂಲಕ ಪ್ರಕಟಿಸಿ ಇದರಿಂದ ಬಾಧಿತರಾಗಬಹುದಾದಂಥ ಎಲ್ಲಾ ವ್ಯಕ್ತಿಗಳ ಮಾಹಿತಿಗೆ ತರಲಾಗಿದೆ ಮತ್ತು ಸದರಿ ನಿಯಮಗಳನ್ನು ಅಧಿಕೃತ ರಾಜ್ಯ ಪತ್ರದಲ್ಲಿ ಪ್ರಕಟವಾದ ದಿನಾಂಕದಿಂದ ಹದಿನೈದು ದಿನಗಳ ನಂತರ ಪರಿಗಣನೆಗೆ ತೆಗೆದುಕೊಳ್ಳಲಾಗುವುದೆಂದು ಈ ಮೂಲಕ ಸೂಚನೆ ನೀಡಿದೆ.

ಸದರಿ ಕರಡು ನಿಯಮಗಳಿಗೆ ಸಂಬಂಧಿಸಿದಂತೆ, ಮೇಲೆ ನಿಗದಿಪಡಿಸಲಾದ ಅವಧಿಯು ಮುಕ್ತಾಯಗೊಳ್ಳುವ ಮುನ್ನ ಸರ್ಕಾರದಲ್ಲಿ ಯಾವುದೇ ವ್ಯಕ್ತಿಗಳಿಂದ ಸ್ವೀಕರಿಸಬಹುದಾದ ಯಾವುದೇ ಆಕ್ಷೇಪಣೆ ಅಥವಾ ಸಲಹೆಗಳನ್ನು ರಾಜ್ಯ ಸರ್ಕಾರವು ಪರಿಗಣಿಸುವುದು. ಆಕ್ಷೇಪಣೆ ಮತ್ತು ಸಲಹೆಗಳನ್ನು ಸರ್ಕಾರದ ಕಾರ್ಯದರ್ಶಿ (ಪಂ.ರಾಜ್) ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ, ಬಹುಮಹಡಿಗಳ ಕಟ್ಟಡ, ಡಾ|| ಬಿ.ಆರ್. ಅಂಬೇಡ್ಕರ್ ವೀಧಿ, ಬೆಂಗಳೂರು-560001 ಈ ವಿಳಾಸಕ್ಕೆ ಕಳುಹಿಸಬಹುದಾಗಿದೆ.

## ಕರಡು ನಿಯಮಗಳು

**1. ಶೀರ್ಷಿಕೆ ಮತ್ತು ಪ್ರಾರಂಭ:-** (1) ಈ ನಿಯಮಗಳನ್ನು ಕರ್ನಾಟಕ ಸಾಮಾನ್ಯ ಸೇವೆ (ಅಭಿವೃದ್ಧಿ ಶಾಖೆ ಹಾಗೂ ಸ್ಥಳೀಯ ಆಡಳಿತ ಶಾಖೆ) (ವೃಂದ ಮತ್ತು ನೇಮಕಾತಿ) (ತಿದ್ದುಪಡಿ) ನಿಯಮಗಳು, 2019 ಎಂದು ಕರೆಯತಕ್ಕದ್ದು.

(2) ಈ ನಿಯಮಗಳು ಅಧಿಕೃತ ರಾಜ್ಯ ಪತ್ರದಲ್ಲಿ ಪ್ರಕಟವಾದ ದಿನಾಂಕದಿಂದ ಜಾರಿಗೆ ಬರತಕ್ಕದ್ದು.

**2. ಅನುಸೂಚಿಯ ತಿದ್ದುಪಡಿ:-** ಕರ್ನಾಟಕ ಸಾಮಾನ್ಯ ಸೇವೆ (ಅಭಿವೃದ್ಧಿ ಶಾಖೆ ಹಾಗೂ ಸ್ಥಳೀಯ ಆಡಳಿತ ಶಾಖೆ) (ವೃಂದ ಮತ್ತು ನೇಮಕಾತಿ) ನಿಯಮಗಳು, 2008 ರ ಅನುಸೂಚಿಯಲ್ಲಿ ಕ್ರಮ ಸಂಖ್ಯೆ: 10 ರಲ್ಲಿನ "ಗ್ರಾಮ ಪಂಚಾಯಿತಿ ಕಾರ್ಯದರ್ಶಿ ಮತ್ತು ಗ್ರಾಮೀಣಾಭಿವೃದ್ಧಿ ಸಹಾಯಕ (ಗ್ರೇಡ್-2)" ಅಂಕಣ 5 ರಲ್ಲಿ ಉಪ ಶೀರ್ಷಿಕೆ "ಆಯ್ಕೆ ಮೂಲಕ ನೇರ ನೇಮಕಾತಿ", ನಂತರ ಈ ಕೆಳಕಂಡಂತೆ ಪರಂತುಕವನ್ನು ಅಳವಡಿಸಿಕೊಳ್ಳತಕ್ಕದ್ದು, ಅದೇನೆಂದರೆ:-

> "ಪರಂತು, ಕರ್ನಾಟಕ ಸಿವಿಲ್ ಸೇವಾ (ಅಪಿಕ ಹುದ್ದೆಗಳ ನೇಮಕಾತಿ) (ತಿದ್ದುಪಡಿ) ನಿಯಮಗಳು 2013 ದಿನಾಂಕ: 02-01-2014 ರಂದು ಜಾರಿಗೆ ಬಂದಿದ್ದು, ಹಿಂದಿನ ವಿಲೇಜ್ ಪಂಚಾಯಿತಿಗಳು ಅಥವಾ ಮಂಡಲ ಪಂಚಾಯಿತಿಗಳು ಅಥವಾ ಗ್ರಾಮ ಪಂಚಾಯಿತಿಗಳಲ್ಲಿ ಪೂರ್ಣಾವಧಿ ಕಾರ್ಯದರ್ಶಿ, ಲೆಕ್ಕಿಗರು, ಗುಮಾಸ್ತರು, ಬೆರಳಚ್ಚುಗಾರರು ಅಥವಾ ಬಿಲ್‌ಕಲೆಕ್ಟರ್‌ಗಳು ಆ ದಿನಾಂಕದಂದು ಎಸ್.ಎಸ್.ಎಲ್.ಸಿ. ವಿದ್ಯಾರ್ಹತೆ ಹೊಂದಿದ್ದು, ಅಂದು ಸೇವೆಯಲ್ಲಿರುವವರು, ಆಯ್ಕೆ

ಮೂಲಕ ನೇರ ನೇಮಕಾತಿ ಹೊಂದಲು ಪದವಿ ಪೂರ್ವ ಶಿಕ್ಷಣ ಪರೀಕ್ಷೆ ಅಥವಾ ತತ್ಸಮಾನ ಪರೀಕ್ಷೆಯಲ್ಲಿ ತೇರ್ಗಡೆ ಹೊಂದುವುದನ್ನು ನಿಗಧಿಪಡಿಸಿರುವುದು ಅನ್ವಯಿಸುವುದಿಲ್ಲ".

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

25/1/19
(ಮುಬಾರಕ್ ಅಹ್ಮದ್)
ಉಪನಿರ್ದೇಶಕರು ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

ಗೆ:

ಸಂಕಲನಕಾರರು, ಕರ್ನಾಟಕ ರಾಜ್ಯ ಪತ್ರ, ಬೆಂಗಳೂರು- ದಿನಾಂಕ: 21-01-2019 ರ ಅಧಿಸೂಚನೆಯನ್ನು ವಿಶೇಷ ರಾಜ್ಯ ಪತ್ರದಲ್ಲಿ ಪ್ರಕಟಿಸಲು ಮತ್ತು ಪ್ರಕಟಿತ 100 ಪ್ರತಿಗಳನ್ನು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಗೆ ಒದಗಿಸಲು ಕೋರಿದೆ.

ಪ್ರತಿ:

1) ಎಲ್ಲಾ ಜಿಲ್ಲಾ ಪಂಚಾಯಿತಿಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು.
2) ಎಲ್ಲಾ ಜಿಲ್ಲಾ ಪಂಚಾಯಿತಿಗಳ ಉಪ ಕಾರ್ಯದರ್ಶಿಗಳು.
3) ಸಿಸ್ಟಮ್ ಮ್ಯಾನೇಜರ್, ಗಣಕ ಕೋಶ, ಗ್ರಾ.ಅ.ಪಂ.ರಾಜ್ ಇಲಾಖೆ. (ವೆಬ್ ಸೈಟ್‌ನಲ್ಲಿ ಅಳವಡಿಸಲು)
4) ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿ.

ಪ್ರತಿ ಮಾಹಿತಿಗಾಗಿ:

1) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರ ಆಪ್ತ ಕಾರ್ಯದರ್ಶಿಗಳು
2) ಸರ್ಕಾರದ ಪ್ರಧಾನ ಕಾರ್ಯದರ್ಶಿ/ಕಾರ್ಯದರ್ಶಿ (ಪಂ.ರಾಜ್) ಗ್ರಾ.ಅ.ಪಂ.ರಾಜ್ ಇಲಾಖೆ ರವರ ಆಪ್ತ ಕಾರ್ಯದರ್ಶಿ.